## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರವು ಅಳವಡಿಸಿಕೊಂಡಿರುವ ವಕೀಲರ ಶುಲ್ಕದ ರೀತಿಯಲ್ಲಿ ರಾಜ್ಯ ಕಾನೂನು ಸೇವಾ ಪ್ರಾಧಿಕಾರದಡಿ ಕಾರ್ಯನಿರ್ವಹಿಸುತ್ತಿರುವ ವಕೀಲರ ಶುಲ್ಕವನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಲಾ 52 ಎಲ್ಎಡಿ 2013, ದಿ:22-11-2013
2. ಸದಸ್ಯ ಕಾರ್ಯದರ್ಶಿ, ರಾಜ್ಯ ಕಾನೂನು ಸೇವಾ ಪ್ರಾಧಿಕಾರ ರವರ ಪತ್ರ ಸಂಖ್ಯೆ: ಕರಾಸೇಪ್ರಾ:2:ಎಡಿಎಂ:2009, ದಿ:14-11-2016 ಹಾಗೂ ದಿ:19-04-2017.

*******

ಪ್ರಸ್ತಾವನೆ:

ಮೇಲೆ ಓದಲಾದ(1)ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಕಾನೂನು ಸೇವಾ ಪ್ರಾಧಿಕಾರದ ಪ್ಯಾನೆಲ್ ವಕೀಲರ ಶುಲ್ಕವನ್ನು ಹೆಚ್ಚಿಸಲಾಗಿರುತ್ತದೆ. ಹಾಗೂ ಈ ಸಂಬಂಧಿಸಿದಂತೆ, The Legal Services Act, 1987ರ ಸೆಕ್ಷನ್ 29ಂ ರಲ್ಲಿ ಪ್ರದತ್ತವಾದ ಅಧಿಕಾರದನ್ವಯ Karnataka State Legal Services Authority Regulations, 1997ರ ಷೆಡ್ಯೂಲ್ 1 ಮತ್ತು ಷೆಡ್ಯೂಲ್ 2 ಗಳನ್ನು ತಿದ್ದುಪಡಿ ಮಾಡಿಕೊಳ್ಳುವಂತೆ ಕರ್ನಾಟಕ ಕಾನೂನು ಸೇವಾ ಪ್ರಾಧಿಕಾರ ರವರಿಗೆ ನಿರ್ದೇಶಿಸಲಾಗಿರುತ್ತದೆ.

ಮೇಲೆ ಓದಲಾದ (2)ರ ಪತ್ರ ದಿನಾಂಕ:14-11-2016ರ ಪತ್ರದಲ್ಲಿ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ರವರು ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರದ 14ನೇ ಅಖಿಲ ಭಾರತ ಸಭೆಯಲ್ಲಿ ವಿಷಯ ಸಂಖ್ಯೆ:03 ರಡಿಯಲ್ಲಿ ಪ್ಯಾನೆಲ್ ವಕೀಲರುಗಳಿಗೆ ಶುಲ್ಕ ಪಾವತಿಯ ಬಗ್ಗೆ ಪರಿಗಣಿಸಲು ರಚಿಸಲಾದ ಸಮಿತಿಯು ಸಲ್ಲಿಸಿದ್ದ ವರದಿಯು ಪರಿಶೀಲಿಸಿರುವುದೆಂದು, ಸದರಿ ಸಮಿತಿಯಲ್ಲಿ ವಕೀಲರುಗಳಿಗೆ ಉಚ್ಛ ನ್ಯಾಯಾಲಯ ಹಾಗೂ ಕೆಳಹಂತದ ನ್ಯಾಯಾಲಯಗಳ ಮುಂದೆ ಮಂಡಿಸಲಾಗುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಕನಿಷ್ಠ ಶುಲ್ಕ ಪಾವತಿಸುವ ಬಗ್ಗೆ ತೆಗೆದುಕೊಳ್ಳಲಾದ ನಿರ್ಣಯವನ್ನು ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರವು ಅಳವಡಿಸಿಕೊಳ್ಳಲು ತೀರ್ಮಾನಿಸಿರುತ್ತದೆ. ಎಂದೂ ಅದರಂತೆ ಇತರೆ ರಾಜ್ಯ ಕಾನೂನು ಸೇವಾ ಪ್ರಾಧಿಕಾರಗಳು ಸಹ ಈ ನಿರ್ಣಯವನ್ನು ಅಳವಡಿಸಿಕೊಳ್ಳಬಹುದೆಂದು ತಿಳಿಸಲಾದ ಹಿನ್ನೆಲೆಯಲ್ಲಿ ಸದರಿ ವಿಷಯವನ್ನು ದಿನಾಂಕ 29/04/2016ರಂದು ನಡೆದ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ ರಾಜ್ಯ ಕಾನೂನು ಸೇವೆಗಳ ಪ್ಯಾನೆಲ್ ಅಡ್ವೋಕೇಟ್‌ಗಳಿಗೆ ರಾಷ್ಟ್ರೀಯ ಕಾನೂನು ಸೇವೆಗಳ

ಪ್ರಾಧಿಕಾರದವರು ಪ್ರಸ್ತಾಪಿರುವ ಕನಿಷ್ಠ ಶುಲ್ಕ ರಚನೆಯನ್ನು ಅಳವಡಿಸಿಕೊಳ್ಳಲು ಹಾಗೂ ಈ ಸಂಬಂಧಿಸಿದಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ನಿರ್ಣಯಿಸಲಾಗಿರುತ್ತದೆಯೆಂದೂ ಹಾಗೂ ಅದರಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವುದಾಗಿ ತಿಳಿಸುತ್ತಾ ಈ ಸಂಬಂಧಿಸಿದಂತೆ ಅಧಿಸೂಚನೆ ಹೊರಡಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ (2) ರ ಸರ್ಕಾರದ ಆದೇಶದಲ್ಲಿ ನಿರ್ದೇಶಿಸಿರುವಂತೆ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ಇದುವರೆಗೂ ಸದರಿ ಆದೇಶದಲ್ಲಿ ಹೆಚ್ಚಿಸಲಾಗಿರುವ ವಕೀಲರ ಶುಲ್ಕವನ್ನು ಅಳವಡಿಸಿಕೊಂಡಿರುವುದಕ್ಕೆ ಸಂಬಂಧಿಸಿದಂತೆ Karnataka State Legal Services Authority Regulations, 1997 Schedule-I and Schedule-II ರ ತಿದ್ದುಪಡಿ ಮಾಡಿರುವುದಿಲ್ಲ. ಹಾಗೂ ಮೇಲೆ ಓದಲಾದ(3) ರಲ್ಲಿ ದಿನಾಂಕ:19-04-2017ರ ಪತ್ರದಲ್ಲಿ ಸದರಿ ಪ್ರಸ್ತಾಪಿಸಿರುವ ತಿದ್ದುಪಡಿ ಮಾಡುವ ಸಮಯದಲ್ಲಿ ಅದನ್ನು ಸಹ ಅಳವಡಿಸಲಾಗುವುದು ಎಂದು ತಿಳಿಸಿರುತ್ತಾರೆ. ಹಾಗೂ ಈ ಬಗ್ಗೆ ತಗಲುವ ವೆಚ್ಚವನ್ನು ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರದ ಅನುದಾನದಿಂದ ಭರಿಸಲಾಗುವುದೆಂದು ತಿಳಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಲಾ 21 ಎಲ್‌ಎಡಿ 2017, ಬೆಂಗಳೂರು, ದಿನಾಂಕ: 25.09.2017</u>**

ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರದ ಅಳವಡಿಸಿಕೊಂಡಿರುವ ವಕೀಲರ ಶುಲ್ಕದ ರೀತಿಯಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದಡಿ ಕಾರ್ಯನಿರ್ವಹಿಸುತ್ತಿರುವ ವಕೀಲರ ಶುಲ್ಕವನ್ನು ಈ ಕೆಳಕಂಡಂತೆ ಹೆಚ್ಚಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

*"A. High Court*

I. *Drafting of substantive pleading such as Writ Petition, Counter Affidavit, Memo of Appeal, Revision, Reply, Rejoinder, Replication – Rs.1,500/-*

II. *Drafting of Miscellaneous applications such as stay, bail, direction, exemption etc. Rs.500/- per application subject to maximum of Rs.1,000/- for all applications.*

III. *Appearance – Rs.1,000/- per effective hearing and Rs.750/- for non-effective hearing subject to maximum of Rs.10,000/- (per case).*

*B. Subordinate Courts at all levels including Tribunals*

*I. Drafting of substative pleading such as suit, Matrimonial Proceedings such as Divorce, Maintance, Custody, Restitution etc., Succession, Probate, Memo of Appeal, Revision, Written Statement, Reply, Rejoinder, Replication etc. – Rs.1,200/-*

*II. Drafting of miscellaneous applications such as stay, bail, direction, exemption etc. – Rs.400/- per application subject to maximum of Rs.800/- for all applications.*

*III. Appearance – Rs.750/- per effective hearing and Rs.500/- for non effective hearing subject to a maximum of Rs.7,500/- (per case)*

ಸರ್ಕಾರದ ಆದೇಶ ಸಂಖ್ಯೆ:- ಲಾ 52 ಎಲ್‌ಎಡಿ 2013, 22-11-2013 ಹಾಗೂ ಪ್ರಸ್ತುತ ಆದೇಶದನ್ವಯ ಹೆಚ್ಚಿಸಲಾದ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ವಕೀಲರ ಶುಲ್ಕವನ್ನು ಅಳವಡಿಸಿಕೊಂಡಿರುವುದಕ್ಕೆ ಸಂಬಂಧಿಸಿದಂತೆ ಕಾನೂನು ಸೇವೆಗಳ ಪ್ರಾಧಿಕಾರಗಳ ಅಧಿನಿಯಮ 1987 ರ ಸೆಕ್ಷನ್ 29 A ರನ್ವಯ Karnataka State Legal Services Authority Regulations, 1997 Schedule-I and Schedule-II ರಲ್ಲಿ ತಿದ್ದುಪಡಿ ಮಾಡಿಕೊಳ್ಳತಕ್ಕದ್ದು. ಹಾಗೂ ಕಾನೂನು ಸೇವೆಗಳ ಪ್ರಾಧಿಕಾರಗಳ ಅಧಿನಿಯಮ, 1987 ರ ಸೆಕ್ಷನ್ 30 (2) ರನ್ವಯ ಸರ್ಕಾರಕ್ಕೆ ಈ ಸಂಬಂಧಿಸಿದಂತೆ ಅನುಪಾಲನಾ ವರದಿಯನ್ನು ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ರವರ ಟಿಪ್ಪಣಿ ಸಂಖ್ಯೆ:4853, ದಿ:14-09-2017 ರಲ್ಲಿನ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

25/9/17

(ಆದಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕಾನೂನು ಇಲಾಖೆ (ಆಡಳಿತ-2)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು. (ಇವರಿಗೆ ಇದನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಮತ್ತು ಅದರ 200 ಪ್ರತಿಗಳನ್ನು ಒದಗಿಸುವ ಸಲುವಾಗಿ)

<u>ಪ್ರತಿ ಇವರಿಗೆ:</u>

1. ಮಹಾಲೇಖಪಾಲರು (ಎ ಮತ್ತು ಇ) (ಲೆಕ್ಕ ಪರಿಶೋಧನೆ-1, ಲೆಕ್ಕ ಪರಿಶೋಧನೆ-2) ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, 'ನ್ಯಾಯದೇಗುಲ, ಸಿದ್ದಯ್ಯ ರಸ್ತೆ, ಬೆಂಗಳೂರು -560 027
4. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-2 & 10, ವಿಧಾನಸೌಧ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ವಸತಿ ಕಾನೂನು ಮತ್ತು ನಗರಾಭಿವೃದ್ಧಿ ಇಲಾಖೆ
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಜಂಟಿ ಕಾರ್ಯದರ್ಶಿ, ಕಾನೂನು ಇಲಾಖೆ (ಆಡಳಿತ-2), ಇವರ ಆಪ್ತ ಸಹಾಯಕರು, ವಿಧಾನಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ.
9. ಹೆಚ್ಚುವರಿ ಪ್ರತಿಗಳು